**ಕರ್ನಾಟಕ ಸರ್ಕಾರ ನಡವಳಿಗಳು**

ವಿಷಯ : 2015-16ನೇ ಸಾಲಿನಲ್ಲಿ ರಾಷ್ಟ್ರೀಯ ಜೈವಾನಿಲ ಅಭಿವೃದ್ಧಿ ಯೋಜನೆಯಡಿ ಬಿಡುಗಡೆ ಮಾಡಿದ ಕೇಂದ್ರ ಸಹಾಯಧನದಡಿ ಬಾಕಿ ಉಳಿದ ಅನುದಾನವನ್ನು ಹಿಂಪಡೆದು ಅಗತ್ಯತೆ ಇರುವ ಜಿಲ್ಲೆಗಳಿಗೆ ಬಿಡುಗಡೆ ಮಾಡುವ ಕುರಿತು.

ಓದಲಾಗಿದೆ : ಸರ್ಕಾರದ ಆದೇಶ ಸಂಖ್ಯೆ ಗ್ರಾಅಪ 52 ಜೈಅಯೋ 2015(ಭಾಗ-1), ದಿನಾಂಕ 15.03.2016.

**ಪ್ರಸ್ತಾವನೆ :**

ಮೇಲೆ ಓದಲಾದ ಆದೇಶದಲ್ಲಿ 2015-16ನೇ ಸಾಲಿಗೆ ರಾಷ್ಟ್ರೀಯ ಜೈವಾನಿಲ ಅಭಿವೃದ್ಧಿ ಯೋಜನೆಯ ಅನುಷ್ಠಾನಕ್ಕಾಗಿ ರೂ.863.50ಲಕ್ಷ ಕೇಂದ್ರ ಸಹಾಯಧನವನ್ನು ಬಿಡುಗಡೆ ಮಾಡಿದೆ.

2015-16ನೇ ಸಾಲಿನಲ್ಲಿ 16000 ಜೈವಾನಿಲ ಸ್ಥಾವರಗಳ ಭೌತಿಕ ಗುರಿಗೆ 5834(ಸಾಮಾನ್ಯ ವರ್ಗ) ಸ್ಥಾವರಗಳ ಪ್ರಗತಿಗೆ ಕೇಂದ್ರ ಸಹಾಯಧನ ಹಾಗೂ ಟರ್ನ್ ಕೀ ಫೀ(ನಿರ್ವಹಣಾ ವೆಚ್ಚ) ಸೇರಿದಂತೆ ರೂ.630.40ಲಕ್ಷಗಳ ಅಗತ್ಯತೆಗೆ ರೂ.863.50ಲಕ್ಷಗಳನ್ನು ಬಿಡುಗಡೆ ಮಾಡಿರುವುದರಿಂದ ರೂ.233.10ಲಕ್ಷಗಳನ್ನು ಹೆಚ್ಚಿಗೆ ಬಿಡುಗಡೆ ಮಾಡಿದೆ.

5834 ಜೈವಾನಿಲ ಸ್ಥಾವರಗಳ ಪ್ರಗತಿಗೆ ಸಂಬಂಧಿಸಿದಂತೆ ಬಿಜಾಪುರ, ಚಾಮರಾಜನಗರ, ಚಿಕ್ಕಬಳ್ಳಾಪುರ, ಕಲಬುರಗಿ, ರಾಮನಗರ, ಉತ್ತರ ಕನ್ನಡ ಮತ್ತು ಯಾದಗಿರಿ ಜಿಲ್ಲಾ ಪಂಚಾಯತ್‌ಗಳಿಗೆ ಅಗತ್ಯತೆಗಿಂತ ಕಡಿಮೆ ಕೇಂದ್ರ ಸಹಾಯಧನ ಬಿಡುಗಡೆ ಮಾಡಿದೆ.

ಇದನ್ನು ಸರಿದೂಗಿಸುವ ನಿಟ್ಟಿನಲ್ಲಿ ಬಿಡುಗಡೆ ಮಾಡಿದ ಕೇಂದ್ರ ಸಹಾಯಧನದಡಿ ಬಾಕಿ ಉಳಿಸಿಕೊಂಡಿರುವ ಧಾರವಾಡ, ಕೊಡಗು ಮತ್ತು ಶಿವಮೊಗ್ಗ ಜಿಲ್ಲಾ ಪಂಚಾಯತ್‌ಗಳಿಂದ ಅಗತ್ಯವಿರುವ ಅನುದಾನವನ್ನು ಹಿಂಪಡೆದು ರೂ.28.08ಲಕ್ಷಗಳನ್ನು ಬಿಜಾಪುರ, ಚಾಮರಾಜನಗರ, ಚಿಕ್ಕಬಳ್ಳಾಪುರ, ಕಲಬುರಗಿ, ರಾಮನಗರ, ಉತ್ತರ ಕನ್ನಡ ಮತ್ತು ಯಾದಗಿರಿ ಜಿಲ್ಲಾ ಪಂಚಾಯತ್‌ಗಳಿಗೆ ವರ್ಗಾಯಿಸಿ ಮರು ಹಂಚಿಕೆ ಮಾಡಿ ಬಿಡುಗಡೆ ಮಾಡಲು ಸರ್ಕಾರ ತೀರ್ಮಾನಿಸಿದೆ. ಪ್ರಯುಕ್ತ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ : ಗ್ರಾಅಪ/92/ಜೈಅಯೋ/2016 ಬೆಂಗಳೂರು, ದಿನಾಂಕ 23.01.2017.**

ಪ್ರಸ್ತಾವನೆಯಲ್ಲಿ ವಿವರಿಸಿದಂತೆ 2015-16ನೇ ಸಾಲಿನಲ್ಲಿ ರಾಷ್ಟ್ರೀಯ ಜೈವಾನಿಲ ಅಭಿವೃದ್ಧಿ ಯೋಜನೆಯಡಿ ರೂ.863.50ಲಕ್ಷ ಕೇಂದ್ರ ಸಹಾಯಧನ ಬಿಡುಗಡೆ ಮಾಡಿದೆ. ಈ ಪೈಕಿ ಬಿಜಾಪುರ, ಚಾಮರಾಜನಗರ, ಚಿಕ್ಕಬಳ್ಳಾಪುರ, ಕಲಬುರಗಿ, ರಾಮನಗರ, ಉತ್ತರ ಕನ್ನಡ ಮತ್ತು ಯಾದಗಿರಿ ಜಿಲ್ಲಾ ಪಂಚಾಯತ್‌ಗಳಿಗೆ ಸಾಧಿಸಿದ ಪ್ರಗತಿ ಅನುಗುಣವಾಗಿ ಅಗತ್ಯವಿರುವ ಅನುದಾನಕ್ಕಿಂತ ಕಡಿಮೆ ಅನುದಾನವನ್ನು ಬಿಡುಗಡೆ ಮಾಡಿದ ಪ್ರಯುಕ್ತ ಇದನ್ನು ಸರಿದೂಗಿಸುವ ನಿಟ್ಟಿನಲ್ಲಿ ರೂ.28.08ಲಕ್ಷಗಳ ಕೇಂದ್ರ ಸಹಾಯಧನವನ್ನು ಈ ಕೆಳಕಂಡ ಜಿಲ್ಲಾ ಪಂಚಾಯತ್‌ಗಳಿಂದ ಹಿಂಪಡೆದು ಅಗತ್ಯವಿರುವ ಈ ಕೆಳಕಂಡ ಜಿಲ್ಲೆಗಳಿಗೆ ವರ್ಗಾಯಿಸಿ ಮರುಹಂಚಿಕೆ ಮಾಡಿ ಆದೇಶಿಸಿದೆ.

(ರೂ.ಲಕ್ಷಗಳಲ್ಲಿ)

| ಕ್ರ.ಸಂ | ಜಿಲ್ಲಾ ಪಂಚಾಯತ್ | ಲಭ್ಯವಿರುವ ಕೇಂದ್ರ ಸಹಾಯಧನ | ಹಿಂಪಡೆದ ಕೇಂದ್ರ ಸಹಾಯಧನ | | ವರ್ಗಾಯಿಸಿದ ಜಿಲ್ಲೆ | ವರ್ಗಾಯಿಸಿದ ಕೇಂದ್ರ ಸಹಾಯಧನ |
|---|---|---|---|---|---|---|
| 1 | ಧಾರವಾಡ | 13.20 | 10.48 | 1 | ವಿಜಯಪುರ | 8.06 |
| | | | | 2 | ಯಾದಗಿರಿ | 2.42 |
| 2 | ಕೊಡಗು | 6.10 | 5.84 | 3 | ಚಿಕ್ಕಬಳ್ಳಾಪುರ | 5.84 |
| 3 | ಶಿವಮೊಗ್ಗ | 15.15 | 11.76 | 4 | ರಾಮನಗರ | 6.18 |
| | | | | 5 | ಚಾಮರಾಜನಗರ | 1.58 |
| | | | | 6 | ಕಲಬುರಗಿ | 1.01 |
| | | | | 7 | ಮಂಡ್ಯ | 2.44 |
| | | | | 8 | ಉತ್ತರ ಕನ್ನಡ | 0.55 |
| **ಒಟ್ಟು** | | **53.45** | **28.08** | **ಒಟ್ಟು** | | **28.08** |

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್ ಧಾರವಾಡ, ಕೊಡಗು ಮತ್ತು ಶಿವಮೊಗ್ಗ ರವರು ಹಿಂಪಡೆದ ಅನುದಾನವನ್ನು ಮರುಹಂಚಿಕೆ ಮಾಡಿ ವರ್ಗಾಯಿಸಿದ ಜಿಲ್ಲಾ ಪಂಚಾಯತ್ ಗಳಿಗೆ RTGS/DD ಮುಖೇನ ವರ್ಗಾಯಿಸುವುದು.

ಹಾಲಿ ವರ್ಗಾಯಿಸಲಾದ ಅನುದಾನವು ಮಹಾಲೇಖಪಾಲರ ಲೆಕ್ಕ ತಪಾಸಣೆಗೊಳಪಟ್ಟು ಕಾರ್ಯಕ್ರಮದ ಮಾರ್ಗಸೂಚಿಯನ್ವಯ ಉದ್ದೇಶಿತ ಕಾರ್ಯಕ್ರಮಕ್ಕಾಗಿ ಮಾತ್ರ ವಿನಿಯೋಗಿಸತಕ್ಕದ್ದು. ಯಾವುದೇ ಕಾರಣಕ್ಕೂ ಅನುದಾನವನ್ನು ಮಾರ್ಗಪಲ್ಲಟ ಹಾಗೂ ವ್ಯಪಗತ ಮಾಡತಕ್ಕದ್ದಲ್ಲ. ಪ್ರಸ್ತುತ ಬಿಡುಗಡೆ ಮಾಡುತ್ತಿರುವ ಸದರಿ ಅನುದಾನವನ್ನು ಗಾಂಧಿ ಸಾಕ್ಷಿ ಕಾಯಕದಡಿ ಇಂಧೀಕರಿಸುವ ಷರತ್ತಿಗೆ ಒಳಪಟ್ಟು ಧಾರವಾಡ, ಕೊಡಗು ಮತ್ತು ಶಿವಮೊಗ್ಗ ಜಿಲ್ಲಾ ಪಂಚಾಯತ್‌ಗಳಿಂದ ಬಿಜಾಪುರ, ಚಾಮರಾಜನಗರ, ಚಿಕ್ಕಬಳ್ಳಾಪುರ, ಕಲಬುರಗಿ, ರಾಮನಗರ, ಉತ್ತರ ಕನ್ನಡ ಮತ್ತು ಯಾದಗಿರಿ ಜಿಲ್ಲಾ ಪಂಚಾಯತ್‌ಗಳಿಗೆ ವರ್ಗಾಯಿಸಿದೆ.

ಸದರಿ ಅನುದಾನವನ್ನು 2015-16ನೇ ಸಾಲಿನಲ್ಲಿ ನಿರ್ಮಿಸಲಾದ ಅನಿಲ ಸ್ಥಾವರಗಳಿಗೆ ಕೇಂದ್ರ ಸಹಾಯಧನ ಪಾವತಿಸಲು ವಿನಿಯೋಗಿಸುವುದು ಹಾಗೂ ಲೆಕ್ಕ ಶೀರ್ಷಿಕೆ 2810-60-196-6-01(ಯೋಜನೆ) ರಡಿ ವೆಚ್ಚ ಭರಿಸಿ ಫಲಾನುಭವಿಗಳ ವಿವರಗಳೊಂದಿಗೆ ನಿಗದಿತ ನಮೂನೆಯಲ್ಲಿ ಹಣ ಬಳಕೆ ಪ್ರಮಾಣ ಪತ್ರವನ್ನು ಸಲ್ಲಿಸುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎನ್. ಕೃಷ್ಣಪ್ಪ)
ನಿರ್ದೇಶಕರು (ಗ್ರಾಮೂಸ-2) ಹಾಗೂ
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಗೆ,

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು / ಮುಖ್ಯ ಲೆಕ್ಕಾಧಿಕಾರಿಗಳು ಜಿಲ್ಲಾ ಪಂಚಾಯತ್ ಧಾರವಾಡ, ಕೊಡಗು, ಶಿವಮೊಗ್ಗ, ಬಿಜಾಪುರ, ಚಾಮರಾಜನಗರ, ಚಿಕ್ಕಬಳ್ಳಾಪುರ, ಕಲಬುರಗಿ, ರಾಮನಗರ, ಉತ್ತರ ಕನ್ನಡ ಮತ್ತು ಯಾದಗಿರಿ.
3. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು / ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್) ರವರ ಆಪ್ತ ಕಾರ್ಯದರ್ಶಿಗಳು, ಗ್ರಾಅಪ ಇಲಾಖೆ.
5. ವಿಶೇಷಾಧಿಕಾರಿ, ಇಲಾಖಾ ಗಣಕ ಕೇಂದ್ರ, ಗ್ರಾಅಪ ಇಲಾಖೆ.
6. ರಕ್ಷಾ ಕಡತಕ್ಕೆ / ಹೆಚ್ಚುವರಿ ಪ್ರತಿ.